# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ ಎಲ್ಲಾ ಜಿಲ್ಲೆಗಳ 1000 ಗ್ರಾಮಗಳಲ್ಲಿ 5ನೇ ಹಂತದ ಸುವರ್ಣ ಗ್ರಾಮೋದಯ ಯೋಜನೆಯನ್ನು ಅನುಷ್ಠಾನಗೊಳಿಸುವ ಕುರಿತು.

ಉಲ್ಲೇಖ: ಸಂಖ್ಯೆ:ಗ್ರಾಅಪ:150:ಆರ್‌ಆರ್‌ಸಿ:2006 ದಿನಾಂಕ:07.10.2006

ಪ್ರಸ್ತಾವನೆ:

ಕರ್ನಾಟಕವು ಏಕೀಕರಣಗೊಂಡು ಒಂದನೇ ನವೆಂಬರ್ 2006ಕ್ಕೆ 50 ವರ್ಷಗಳ ತುಂಬಿದ ಸಂದರ್ಭದಲ್ಲಿ ಆ ವರ್ಷದಿಂದ ಸುವರ್ಣ ಕರ್ನಾಟಕ ವರ್ಷವೆಂದು ಅರ್ಥಪೂರ್ಣವಾಗಿ ಆಚರಿಸಲು ಸರ್ಕಾರವು ಉದ್ದೇಶಿಸಿ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖಾ ವತಿಯಿಂದ ಸುವರ್ಣ ಗ್ರಾಮೋದಯ ಎಂಬ ವಿನೂತನ ಗ್ರಾಮೀಣ ಅಭಿವೃದ್ಧಿ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ. ಈ ಯೋಜನೆಯಡಿ ಹಂತವಾರು ಗ್ರಾಮಗಳನ್ನು ಆಯ್ಕೆ ಮಾಡಿ, ಆಯ್ದ ಗ್ರಾಮಗಳನ್ನು ಸರ್ವತೋಮುಖವಾಗಿ ಅಭಿವೃದ್ಧಿಪಡಿಸುವುದಾಗಿದೆ.

**ಮೊದಲನೇ** ಹಂತದಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ 1204 ಗ್ರಾಮಗಳನ್ನು ಆಯ್ಕೆ ಮಾಡಿ, ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಿ ಜೂನ್ 2010ಕ್ಕೆ ಬಹುಪಾಲು ಮುಕ್ತಾಯಗೊಳಿಸಲಾಗಿದೆ.

**ಎರಡನೇ** ಹಂತದಲ್ಲಿ ಗುಲ್ಬರ್ಗಾ ಕಂದಾಯ ವಿಭಾಗದ 6 ಜಿಲ್ಲೆಗಳಲ್ಲಿ ಅಂದಾಜು ರೂ.208.20 ಕೋಟಿಗಳ ವೆಚ್ಚದಲ್ಲಿ 222 ಗ್ರಾಮಗಳನ್ನು, **ಮೂರನೇ** ಹಂತದಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಅಂದಾಜು ರೂ.1012.05 ಕೋಟಿಗಳ ವೆಚ್ಚದಲ್ಲಿ 1574 ಗ್ರಾಮಗಳನ್ನು ಹಾಗೂ **ನಾಲ್ಕನೇ** ಹಂತದಲ್ಲಿ ಗುಲ್ಬರ್ಗಾ ಕಂದಾಯ ವಿಭಾಗದ 6 ಜಿಲ್ಲೆಗಳಲ್ಲಿ ಅಂದಾಜು ರೂ.214.09 ಕೋಟಿಗಳ ವೆಚ್ಚದಲ್ಲಿ 381 ಗ್ರಾಮಗಳನ್ನು ಆಯ್ಕೆ ಮಾಡಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ.

**2012-13ನೇ ಸಾಲಿನ ಐದನೇ ಹಂತದ ಸುವರ್ಣ ಗ್ರಾಮೋದಯ ಯೋಜನೆಯಡಿಯಲ್ಲಿ 1000 ಗ್ರಾಮಗಳನ್ನು ಆಯ್ಕೆ ಮಾಡಿ ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ.**

ಗ್ರಾಮಗಳ ಆಯ್ಕೆ ವಿಧಾನ, ತಾಲ್ಲೂಕುವಾರು ಅನುದಾನ ಹಂಚಿಕೆ ಮತ್ತು ವಿವಿಧ ಕಾಮಗಾರಿಗಳ ಅನುಷ್ಠಾನ ಮಾರ್ಗಸೂಚಿಯಲ್ಲಿರುವಂತೆ ಅನುಸರಿಸುವುದು. ರೂ.1000.00 ಕೋಟಿ ಅನುದಾನದಲ್ಲಿ ತಲಾನುದಾನ ರೂ.2500/- ರಂತೆ ಒಟ್ಟು 40,00,000 (ನಲವತ್ತು ಲಕ್ಷ) ಗ್ರಾಮೀಣ ಜನಸಂಖ್ಯೆಯ 1000 ಗ್ರಾಮಗಳನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಆಯ್ಕೆ ಮಾಡಲಾಗುವುದು. ಇದರಂತೆ 1000 ಗ್ರಾಮಗಳಿಗೆ ನಿಗದಿಪಡಿಸಿರುವ ಜನಸಂಖ್ಯೆ 40,00,000 ಹಾಗೂ ರಾಜ್ಯದ ಮತ್ತು ಆಯಾ ತಾಲ್ಲೂಕಿನ ಗ್ರಾಮೀಣ ಜನಸಂಖ್ಯೆಯನ್ನು ಗಮನದಲ್ಲಿಟ್ಟುಕೊಂಡು ತಾಲ್ಲೂಕಿನ ಜನಸಂಖ್ಯೆ ಮತ್ತು ರೂ.2500/- ತಲಾನುದಾನದಂತೆ ತಾಲ್ಲೂಕಿನ ಅನುದಾನವನ್ನು ನಿಗದಿಪಡಿಸಲಾಗುತ್ತದೆ.

ತಾಲ್ಲೂಕಿನಲ್ಲಿ ಒಂದಕ್ಕಿಂತ ಹೆಚ್ಚು ವಿಧಾನಸಭಾ ಕ್ಷೇತ್ರಗಳು ಒಳಗೊಂಡಿದ್ದಲ್ಲಿ ಸದರಿ ಕ್ಷೇತ್ರಗಳ ಗ್ರಾಮೀಣ ಜನಸಂಖ್ಯೆಯನ್ನು ಗಮನದಲ್ಲಿರಿಸಿಕೊಂಡು ಪ್ರತಿಯೊಂದು ಕ್ಷೇತ್ರದಲ್ಲೂ ಗ್ರಾಮಗಳನ್ನು ಗುರುತಿಸಿ ತಾಲ್ಲೂಕುವಾರು ಗ್ರಾಮಗಳನ್ನು ಆಯ್ಕೆ ಮಾಡಬೇಕಾಗುತ್ತದೆ.

ಆಯ್ಕೆಯಾದ ಗ್ರಾಮಗಳ ಗ್ರಾಮಾಂತರ ಪ್ರದೇಶದ ಜನಸಂಖ್ಯೆ ಮತ್ತು ತಾಲ್ಲೂಕುಗಳಿಗೆ ನಿಗದಿಯಾದ ಅನುದಾನದಲ್ಲಿ ತಲಾನುದಾನ ಹಂಚಿಕೆಯನ್ನು ನಿಗದಿಪಡಿಸಿ ಆಯಾ ಗ್ರಾಮದ 2001ರ ಜನಗಣತಿಯ ಜನಸಂಖ್ಯೆಯಂತೆ ಗ್ರಾಮಗಳ ಅನುದಾನ ಹಂಚಿಕೆಯಾಗುತ್ತದೆ.

ಸುವರ್ಣ ಗ್ರಾಮೋದಯ ಯೋಜನೆಯ ಉದ್ದೇಶ, ಕಾರ್ಯಾನುಷ್ಠಾನ ವಿಧಿಗಳು ಮಾರ್ಗಸೂಚಿ ಮತ್ತು ಕೈಪಿಡಿ ಮತ್ತು ಸರ್ಕಾರಿ ಸುತ್ತೋಲೆಗಳಲ್ಲಿ ತಿಳಿಸಿದಂತೆ ಇರುತ್ತವೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:29:ಸುಗ್ರಾಯೋ:2012,ಬೆಂಗಳೂರು, ದಿನಾಂಕ: 29.06.2012**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ ಐದನೇ ಹಂತದ ಸುವರ್ಣ ಗ್ರಾಮೋದಯ ಯೋಜನೆಯನ್ನು ರೂ.1000.60 ಕೋಟಿ ಅನುದಾನದಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳ ವ್ಯಾಪ್ತಿಯ 1000 ಗ್ರಾಮಗಳನ್ನು ಅಭಿವೃದ್ಧಿಗೊಳಿಸಲು, ಈ ಕುರಿತು ರಚಿಸಲಾದ ಮಾರ್ಗಸೂಚಿ ಮತ್ತು ಸರ್ಕಾರಿ ಸುತ್ತೋಲೆಗಳನ್ನು ಪಾಲಿಸುವ ಷರತಿಗೊಳಪಟ್ಟು ಇತರೆ ಅಭಿವೃದ್ಧಿ ಇಲಾಖೆಗಳ Convergence ಹೊರತುಪಡಿಸಿ ಅನುಷ್ಠಾನಗೊಳಿಸಲು ಸರ್ಕಾರ ಮಂಜೂರಾತಿ ನೀಡಿದೆ.

ಆಯ್ಕೆಯಾದ ಗ್ರಾಮಗಳಿಗೆ ಹಂಚಿಕೆಯಾದ ಅನುದಾನದಲ್ಲಿ ಶೇ.70 ರಸ್ತೆ ಮತ್ತು ಚರಂಡಿಗೆ, ಶೇ.3 ಘನ ತ್ಯಾಜ್ಯವಸ್ತು ವಿಲೇವಾರಿಗೆ, ಶೇ.2 ಸೋಲಾರ್ ಬೀದಿ ದೀಪ ಅಳವಡಿಸಲು ಹಾಗೂ ಶೇ.10 ಒಂದು ಅಂಗನವಾಡಿ ಕಟ್ಟಡಕ್ಕೆ ಉಳಿದ ಶೇ.15ರಷ್ಟು ಅನುದಾನದಲ್ಲಿ ಆದ್ಯತೆ ಹಾಗೂ ಅವಶ್ಯಕತೆ ಮೇರೆಗೆ ಶಾಲಾ ಕಟ್ಟಡಕ್ಕೆ, ಗ್ರಾಮ ಪಂಚಾಯತಿ ಕಟ್ಟಡಕ್ಕೆ, ಗ್ರಂಥಾಲಯ ಕಟ್ಟಡಕ್ಕೆ, ಮಹಿಳಾ ಎಸ್‌ಹೆಚ್‌ಜಿಗಳ ವರ್ಕ್‌ಶೆಡ್, ಬಯಲು ರಂಗಮಂದಿರ ಮತ್ತು ಕೊನೆಯ ಆದ್ಯತೆ ಮೇರೆಗೆ ಸಮುದಾಯ ಭವನ, ಐ.ಇ.ಸಿ ಚಟುವಟಿಕೆಗೆ ವಿನಿಯೋಗಿಸುವುದು.

ಸುವರ್ಣ ಗ್ರಾಮೋದಯ ಯೋಜನೆಯ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿ ಒದಗಿಸಿರುವ ಅನುದಾನವನ್ನು ಜಿಲ್ಲೆಗಳಿಗೆ/ಗ್ರಾಮಗಳಿಗೆ ಹಂಚಿಕೆಯಾಗಿರುವ ಅನುದಾನದಲ್ಲಿ ಆಯಾ ಲೆಕ್ಕ ಶೀರ್ಷಿಕೆಯಡಿ ಸದರಿ ಜನಾಂಗದವರು ವಾಸಿಸುವ ಪ್ರದೇಶಗಳ ಅಭಿವೃದ್ಧಿಗೆ ಕಡ್ಡಾಯವಾಗಿ ಭರಿಸತಕ್ಕದ್ದು.

ಸುವರ್ಣ ಗ್ರಾಮೋದಯ ಯೋಜನೆಯ ವೆಚ್ಚವನ್ನು ಈ ಕೆಳಕಂಡ ಲೆಕ್ಕ ಶೀರ್ಷಿಕೆಗಳಡಿ ಭರಿಸುವುದು.

1. 4215-02-800-0-02-132 (ಯೋಜನೆ)- ಬಂಡವಾಳ ವೆಚ್ಚಗಳು
2. 4215-02-800-0-02-422 (ಯೋಜನೆ)- ವಿಶೇಷ ಘಟಕ ಯೋಜನೆ
3. 4215-02-800-0-02-423 (ಯೋಜನೆ)- ಗಿರಿಜನ ಉಪ ಯೋಜನೆ

ಈ ಆದೇಶವನ್ನು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ:ಯೋಇ:39:ಜಿಯೋವಿ:2012 ದಿ:03.05.2012 ಮತ್ತು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:FD:237:Exp.06/2012 ದಿ:08.05.2012ರಲ್ಲಿ ನೀಡಿದ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

11/6/12

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಯನ್ನು:

1. ಮಹಾ ಲೇಖಪಾಲರು(ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾ ಲೇಖಪಾಲರು(ಆಡಿಟ್-1), ಕರ್ನಾಟಕ, ಬೆಂಗಳೂರು.
3. ಮಹಾ ಲೇಖಪಾಲರು(ಆಡಿಟ್-2), ಕರ್ನಾಟಕ, ಬೆಂಗಳೂರು.
4. ಮಾನ್ಯ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿ, ಮುಖ್ಯಮಂತ್ರಿಗಳ ಕಾರ್ಯಾಲಯ, ವಿಧಾನಸೌಧ, ಬೆಂಗಳೂರು.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಆಪ್ತ ಕಾರ್ಯದರ್ಶಿ. ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾ..ಅ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
10. ಸರ್ಕಾರದ ಕಾರ್ಯದರ್ಶಿಗಳು, ಗ್ರಾ..ಅ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
11. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು.
12. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು.
13. ಸರ್ಕಾರದ ಪ್ರಧಾನ ಕಾರ್ಯದರ್ಶಿ, ತೋಟಗಾರಿಕೆ ಇಲಾಖೆ, ಬೆಂಗಳೂರು.
14. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬೆಂಗಳೂರು.

15. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು.
16. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನಾ ಇಲಾಖೆ, ಬೆಂಗಳೂರು.
17. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಇಂಧನ ಇಲಾಖೆ, ಬೆಂಗಳೂರು.
18. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪಶು ಸಂಗೋಪನೆ ಇಲಾಖೆ, ಬೆಂಗಳೂರು.
19. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ಬೆಂಗಳೂರು.
20. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
21. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯುವಜನ ಸೇವೆಗಳ ಇಲಾಖೆ. ಬೆಂಗಳೂರು.
22. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ. ಬೆಂಗಳೂರು.
23. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ. ಬೆಂಗಳೂರು.
24. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ, ಬೆಂಗಳೂರು.
25. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬೆಂಗಳೂರು.
26. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ(ಸಚಿವ ಸಂಪುಟ) ವಿಧಾನಸೌದ, ಬೆಂಗಳೂರು.
27. ವಿಶೇಷಾಧಿಕಾರಿಗಳು (ಜಿ.ಪಂ) ಮತ್ತು ಪದನಿಮಿತ್ತ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು.
28. ನಿರ್ದೇಶಕರು, ಗ್ರಾಮೀಣ ಮೂಲಭೂತ ಸೌಲಭ್ಯಗಳು, ಗ್ರಾ..ಅ ಮತ್ತು ಪಂ.ರಾಜ್ ಇಲಾಖೆ.
29. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ. ಅ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
30. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
31. ಮುಖ್ಯ ಇಂಜಿನಿಯರ್, ಗ್ರಾಮೀಣಾಭಿವೃದ್ಧಿ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಕಟ್ಟಡ, ಬೆಂಗಳೂರು-20.
32. ವ್ಯವಸ್ಥಾಪಕ ನಿರ್ದೇಶಕರು, ಕೆಆರ್ಐಡಿಎಲ್, ಚಿನ್ನಸ್ವಾಮಿ ಕ್ರೀಡಾಂಗಣ ಆವರಣ, ಬೆಂಗಳೂರು.
33. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
34. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೈಜ್‌ಮೆಂಟ್, ಸೆಂಟರ್, ಖಜಾನೆ ಇಲಾಖೆ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
35. ರಾಜ್ಯದ ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು,
36. ಅಧೀನ ಕಾರ್ಯದರ್ಶಿಗಳು(ವೆಚ್ಚ-6), ಜಿಲ್ಲಾ ಪಂಚಾಯತ್, ಆರ್ಥಿಕ ಇಲಾಖೆ, ವಿಧಾನಸೌದ, ಬೆಂಗಳೂರು.
37. ಮಾಹಿತಿ ಕೇಂದ್ರಕ್ಕೆ (10) ಪ್ರತಿಗಳು.
38. ರಕ್ಷಾ ಕಡತ/ ಹೆಚ್ಚುವರಿ ಪ್ರತಿ